# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಾಸರಹಳ್ಳಿ ವಲಯ, ಹೆಗ್ಗನಹಳ್ಳಿ ಉಪವಿಭಾಗ

**ದಿನಾಂಕ: 04.01.2022 ರಂದು ಬೆಳಿಗ್ಗೆ 11.30 ಗಂಟೆಗೆ ಶ್ರೀ ರಂಗನಾಥ್ ಬಿ.ಆರ್ ನೋಡಲ್ ಅಧಿಕಾರಿ, ವಾರ್ಡ್ 70 ರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರು, ಹೆಗ್ಗನಹಳ್ಳಿ ಉಪವಿಭಾಗ ಕಛೇರಿಯಲ್ಲಿ ನಡೆದ ಸಭೆಯ ನಡಾವಳಿಗಳು:**

ಸಭೆಯಲ್ಲಿ ಹಾಜರಿದ್ದವರು:

| ಕ್ರ.ಸಂ | ಹೆಸರು | ಪದನಾಮ |
|---|---|---|
| 1 | ಶ್ರೀ ರಂಗನಾಥ್ ಬಿ.ಆರ್ | ನೋಡಲ್ ಅಧಿಕಾರಿ–ವಾರ್ಡ್ ನಂ.70 |
| 2 | ಶ್ರೀ ಅವೀಶ್ ಹೆಚ್ ಎಂ | ಸಹಾಯಕ ಅಭಿಯಂತರರು, ಕಾರ್ಯದರ್ಶಿ ಹಾಗೂ ಸಂಚಾಲಕರು–ವಾರ್ಡ್ 70 |
| 3 | ಕೆ.ಶಿವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4 | ಹರೀಶ್ | ಬೀದಿದೀಪಗಳ ನಿರ್ವಹಣೆಯ ಗುತ್ತಿಗೆದಾರರು |
| 5 | ಸ್ವಾಮಿ | ಕಿರಿಯ ಆರೋಗ್ಯ ಪರಿವೀಕ್ಷಕರು |

-:ನಡಾವಳಿಯ ವರದಿ:-

➢ ಕಾರ್ಯದರ್ಶಿಗಳಾದ ಶ್ರೀ ಅವೀಶ್ ಹೆಚ್ ಎಂ ಮಾತನಾಡುತ್ತಾ ಸಭೆಗೆ ಹಾಜರಾದ ನೋಡಲ್ ಅಧಿಕಾರಿ ಹಾಗೂ ಪಾಲಿಕೆಯ ಅಧಿಕಾರಿಗಳು/ನೌಕರರಿಗೆ ಸ್ವಾಗತ ಕೋರಿದರು.

<u>ವಿಷಯ ಸಂಖ್ಯೆ: 1:–</u> ರಸ್ತೆಗುಂಡಿಗಳ ಬಗ್ಗೆ

ವಾರ್ಡ್ ವ್ಯಾಪ್ತಿಯ ರಸ್ತೆಗಳಲ್ಲಿ ಗುಂಡಿಗಳು ಹೆಚ್ಚಾಗಿದ್ದು, ಈ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಇದಕ್ಕೆ ಸಹಾಯಕ ಅಭಿಯಂತರರು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯ ರಸ್ತೆಗಳಲ್ಲಿ ಬಿದ್ದಿರುವ ರಸ್ತೆಗುಂಡಿಗಳನ್ನು ಪಟ್ಟಿಮಾಡಿಕೊಂಡು, ಶೇಕಡಾ 30ರಷ್ಟು ರಸ್ತೆಗುಂಡಿಗಳನ್ನು ಮುಚ್ಚಲಾಗಿದೆ. ಇನ್ನುಳಿದ ರಸ್ತೆಗುಂಡಿಗಳನ್ನು ಮುಚ್ಚಲು ವೆಟ್‌ಮಿಕ್‌ಅನ್ನು ಅಳವಡಿಸಲಾಗಿರುತ್ತದೆ. ಶೀಘ್ರದಲ್ಲಿ ಡಾಂಬರು ಹಾಕಲಾಗುವುದು ಎಂದು ತಿಳಿಸಿದರು.

- <u>ವಿಷಯ ಸಂಖ್ಯೆ:2</u>

**ವಾರ್ಡ್ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ:**

ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ 70ರ ವ್ಯಾಪ್ತಿಯಲ್ಲಿ ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸುವ ಬಗ್ಗೆ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ವಾರ್ಡ್ 70ರ ಸಹಾಯಕ ಅಭಿಯಂತರರು ಮಾತನಾಡಿ ಈಗಾಗಲೇ ಬೀದಿದೀಪಗಳ ನಿರ್ವಹಣೆಗೆ ಬಳಸಲಾಗುತ್ತಿರುವ ವಾಹನವನ್ನು ಬಳಸಿಕೊಂಡು ಓವರ್ ಹ್ಯಾಂಗಿಂಗ್ ಕೇಬಲ್‌ಗಳನ್ನು ತೆರವುಗೊಳಿಸಲಾಗುತ್ತಿದೆ ಎಂದು ತಿಳಿಸಿದರು.

- **ವಿಷಯ ಸಂಖ್ಯೆ:3**

**ಪೌರಕಾರ್ಮಿಕರ ಮಸ್ಟರಿಂಗ್ ಜಾಗವನ್ನು ಹೆಚ್ಚಿಸುವ ಬಗ್ಗೆ:-**

ವಾರ್ಡ್ 70ರ, ಹಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಕೆ.ಶಿವಲಿಂಗಯ್ಯರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪೌರಕಾರ್ಮಿಕರಿಗೆ ಎರಡು ಸ್ಥಳಗಳಲ್ಲಿ ಮಸ್ಟರಿಂಗ್ ಕಾರ್ಯ ನಡೆಸುತ್ತಿದ್ದು, ಇದರಲ್ಲಿ ಸಹಾಯಕ ಕಾರ್ಯಪಾಲಕ ಅಭಿಯಂತರರ ಕಛೇರಿಯ ಬಳಿ 43 ಪೌರ ಕಾರ್ಮಿಕರ ಮಸ್ಟರಿಂಗ್ ನಡೆಸುತ್ತಿದ್ದು, ಈ ಸ್ಥಳದಲ್ಲಿ ಹೆಚ್ಚಿನ ಸಂಖ್ಯೆಯ ಪೌರಕಾರ್ಮಿಕರು ಇರುವುದರಿಂದ ಹೆಚ್ಚುವರಿಯಾಗಿ ಇನ್ನೊಂದು ಮಸ್ಟರಿಂಗ್ ಸೆಂಟರ್ ನೀಡಲ ಕೋರಿದರು.

ಇದಕ್ಕೆ ನೋಡಲ್ ಅಧಿಕಾರಿರವರು ಪ್ರತಿಕ್ರಿಯಿಸಿ ಈ ಬಗ್ಗೆ ಎಸ್.ಡಬ್ಲ್ಯೂ.ಎಂ ಸೆಲ್ ಮುಖಾಂತರ ಮೇಲಾಧಿಕಾರಿಗಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲು ಸೂಚಿಸಿದರು.

ಕೊನೆಯದಾಗಿ ಮಾನ್ಯ ನೋಡಲ್ ಅಧಿಕಾರಿರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿ/ನೌಕರರಿಗೆ ಮತ್ತು ಸದಸ್ಯರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆಯೂ ಈ ಸಭೆಗಳಲ್ಲಿ ಪೂರ್ವತಯಾರಿಯೊಂದಿಗೆ ಪಾಲ್ಗೊಂಡು ವಾರ್ಡ್ ನಂ.70ರ ಅಭಿವೃದ್ಧಿಗೆ ಸಹಕಾರ ನೀಡಬೇಕೆಂದು ಮನವಿ ಮಾಡಿದರು.

➢ ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ಅವೀಶ್ ಹೆಚ್.ಎಂ ರವರು ಸಭೆಗೆ ಹಾಜರಾದ ಎಲ್ಲಾ ಅಧಿಕಾರಿಗಳು/ನೌಕರರಿಗೂ ಮತ್ತು ಸದಸ್ಯರಿಗೂ ವಂದನೆಯನ್ನು ತಿಳಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ಸಹಾಯಕ ಅಭಿಯಂತರರು**
**ವಾರ್ಡ್ 70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

**ವಾರ್ಡ್ ಸಮಿತಿ ಅಧ್ಯಕ್ಷರು**
**ಹಾಗೂ ವಾರ್ಡ್‌ನ ನೋಡಲ್ ಅಧಿಕಾರಿ**
**ವಾರ್ಡ್ ನಂ.70, ರಾಜಗೋಪಾಲ ನಗರ**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**

ಪ್ರತಿಯನ್ನು:

1) ಮಾನ್ಯ ಶಾಸಕರು, ದಾಸರಹಳ್ಳಿ ವಿಧಾನಸಭಾ ಕ್ಷೇತ್ರ, ರವರ ಆದ್ಯ ಗಮನಕ್ಕೆ ಕಳುಹಿಸಿದೆ.
2) ಮಾನ್ಯ ವಲಯ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
3) ಜಂಟಿ ಆಯುಕ್ತರು, ದಾಸರಹಳ್ಳಿ ವಲಯ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
4) ಕಾರ್ಯಪಾಲಕ ಅಭಿಯಂತರರು (ದಾಸರಹಳ್ಳಿ ವಿಭಾಗ) ರವರ ಮಾಹಿತಿಗಾಗಿ ಕಳುಹಿಸಿದೆ.
5) ಸಹಾಯಕ ಕಾರ್ಯಪಾಲಕ ಅಭಿಯಂತರರು (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
6) ಸಹಾಯಕ ಕಂದಾಯ ಅಧಿಕಾರಿ (ಹೆಗ್ಗನಹಳ್ಳಿ) ರವರ ಮಾಹಿತಿಗಾಗಿ ಕಳುಹಿಸಿದೆ.
7) ಹಿರಿಯ/ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.70 ರವರ ಮಾಹಿತಿಗಾಗಿ
8) ವಾರ್ಡ್ ಸಮಿತಿ ಸಭೆಯ ಸದಸ್ಯರಿಗೆ ಮಾಹಿತಿಗಾಗಿ ಕಳುಹಿಸಿದೆ.
9) ಕಛೇರಿ ಕಡತಕ್ಕೆ